ಅಧ್ಯಕ್ಷರು : "ಖಂಡ 1 ರಿಂದ 4 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 1 ರಿಂದ 4ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು: ಪ್ರಸ್ತಾವ ಎನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ರಮೇಶ್ ಜಿಗಜಿಣಗಿ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಸ್ಟ್ಯಾಂಪ್ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"1997ರ ಕರ್ನಾಟಕ ಸ್ಟ್ಯಾಂಪ್ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

iv) ಕರ್ನಾಟಕ ಮೋಟಾರು ವಾಹನ ತೆರಿಗೆ (ತಿದ್ದುಪಡಿ ವಿಧೇಯಕ 1997

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಪಿ. ಜಿ. ಆರ್. ಸಿಂಧ್ಯ : (ಸಾರಿಗೆ ಸಚಿವರು) : ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಮೋಟಾರು ವಾಹನ ತೆರಿಗೆ (ತಿದ್ದುಪಡಿ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲ್ಪಟ್ಟಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, 1997ರ ಕರ್ನಾಟಕ ಮೋಟಾರು ವಾಹನ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 1 ರಿಂದ 7 :

ಅಧ್ಯಕ್ಷರು : ಖಂಡ 1 ರಿಂದ 7ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 1 ರಿಂದ 7ರವರೆಗೆ,ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ

"ಮೊದಲನೆಯ ಖಂಡ ದೀಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

"ಮೊದಲನೆಯ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಪಿ. ಜಿ. ಆರ್. ಸಿಂಧ್ಯ (ಸಾರಿಗೆ ಸಚಿವರು) : ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಮೋಟಾರು ವಾಹನ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"1997ರ ಕರ್ನಾಟಕ ಮೋಟಾರು ವಾಹನ ತೆರಿಗೆ (ತಿದ್ದುಪಡಿ) ವಿದೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ವಿಷಯ : ಶ್ರೀ ಯಡಿಯೂರಪ್ಪನವರು ಐ.ಎಂ.ಎಲ್. ಬಾಟಲ್ ಗಳಿಗೆ ಖೋಟಾ ಚೀಟಿ ಅಂಟಿಸುತ್ತಿರುವ ಬಗ್ಗೆ ನೀಡಿರುವ ದಾಖಲಾತಿಗಳು.

ಅಧ್ಯಕ್ಷರು : ಮಾನ್ಯ ಉಪ ಮುಖ್ಯ ಮಂತ್ರಿಗಳ ಗಮನಕ್ಕೆ : ನಾನು 1996-97ನೇ ಸಾಲಿನ ಪೂರಕ ಅಂದಾಜುಗಳ ಅಂತಿಮ ಕಂತುಗಳನ್ನು ಮತಕ್ಕೆ ಹಾಕುವುದಕ್ಕೆ ಮೊದಲು ಮಾನ್ಯ ಯಡಿಯೂರಪ್ಪನವರ ಕಡೆಯಿಂದ ನನಗೆ ಒಂದು ಸೂಚನೆಗಳನ್ನು ಕೊಟ್ಟಿದ್ದಾರೆ. ಅವರು ಸರ್ಕಾರದ ವತಿಯಿಂದ ಐ.ಎಂ.ಎಲ್. ಬಾಟಲ್‌ಗಳು ಏನಿವೆ ಅವಕ್ಕೆ ಖೋಟಾ ಚೀಟಿಗಳನ್ನು ಅಂಟಿಸಿ ಸರ್ಕಾರಕ್ಕೆ ತೆರಿಗೆ ವಂಚನೆ ಮಾಡುತ್ತಿದ್ದಾರೆಂಬ ತೀವ್ರ ಸ್ವರೂಪದ ಆರೋಪವನ್ನು ಮಾಡಿ ಅದರ ಬಗ್ಗೆ ದಾಖಲಾತಿಗಳನ್ನು ಕಳುಹಿಸಿಕೊಡುತ್ತೇನೆ, ಸಧ್ಯಕ್ಕೆ ಈಗ ನನ್ನ ಕಡೆ ಇರತಕ್ಕದ್ದನ್ನು ತಮಗೆ ಕೊಡುತ್ತಿದ್ದೇನೆಂದು ಹೇಳಿದ್ದಾರೆ. ಅದನ್ನು ನಾನು ಸರ್ಕಾರದ ಗಮನಕ್ಕೆ ಕಳುಹಿಸಿಕೊಡುತ್ತಿದ್ದೇನೆ. ತಾವು ದಯಮಾಡಿ ಇದರ ಬಗ್ಗೆ ತೀವ್ರವಾಗಿ ಗಮನ ಹರಿಸಿ ಈ ಆರೋಪವನ್ನು ನಿರಾಕರಣೆ ಮಾಡಬೇಕು, ಇಲ್ಲವೇ ಒಪ್ಪಿಕೊಳ್ಳಬೇಕು. ಎರಡೇ ಮಾರ್ಗ ಇರತಕ್ಕದ್ದು. ನಿರಾಕರಣೆ ಮಾಡುವುದಾದರೆ ಹೇಗೆ ಮಾಡುತ್ತೀರಿ ಅಥವಾ ಅವರು ಅಪೇಕ್ಷೆ ಪಟ್ಟಿರತಕ್ಕದ್ದಕ್ಕೆ ಯಾವ ರೀತಿ ಉತ್ತರಿಸುತ್ತೀರೆಂಬುದನ್ನು ಸರ್ಕಾರದ ವಿವೇಚನೆಗೆ ನಾನು ಬಿಡುತ್ತೇನೆ. ಇದನ್ನು ನಾನು ಸರ್ಕಾರಕ್ಕೆ ಕಳುಹಿಸಿಕೊಡುತ್ತೇನೆ. ಆಗಬಹುದೇ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ : ಅದು ನನಗೆ ಗೊತ್ತಾಗಬೇಕಲ್ಲಾ?

Mr. Speaker : I cannot order for an enquiry.

ಶ್ರೀ ಬಿ. ಎಸ್. ಯಡಿಯೂರಪ್ಪ : ಇದರ ಬಗ್ಗೆ ಸದನದ ಸಮಿತಿ ಆಗಬೇಕೆಂದು ನಾನು ಡಿಮ್ಯಾಂಡ್ ಮಾಡಿದ್ದೇನೆ.

ಅಧ್ಯಕ್ಷರು : ಅದಕ್ಕೆ ಅವರು ಏನು ಹೇಳುತ್ತಾರೆ ಕೇಳೋಣ.

ಶ್ರೀ ಸಿದ್ಧರಾಮಯ್ಯ : ಮಾನ್ಯ ಯಡಿಯೂರಪ್ಪನವರು ಮಾಡಿರತಕ್ಕ ಆರೋಪ ಮತ್ತು ಅವರು ಕಳುಹಿಸಿಕೊಟ್ಟಿರತಕ್ಕ ದಾಖಲಾತಿಗಳನ್ನು ತಾವು ಏನು ಕಳುಹಿಸಿಕೊಟ್ಟಿದ್ದೀರಿ ಅದರ